

ವಿಜಯಪುರ ಜ್ಞಾನಯೋಗಾಶ್ರಮದ ವೇದಾಂತ ಕೇಸರಿ ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳ ಪ್ರವಚನ ಸಾರವನ್ನಾಧರಿಸಿ ಜ್ಞಾನಯೋಗಿ ಲಿಂ. ಸಿದ್ಧೇಶ್ವರ ಶ್ರೀಗಳು ರಚಿಸಿದ ಆರು ಸಾಹಿತ್ಯ ಸಂಪುಟಗಳನ್ನು ಗುರುವಾರ ಲೋಕಾರ್ಪಣೆಗೊಳಿಸಲಾಯಿತು. ಸಭಾಪತಿ ಬಸವರಾಜ ಹೊರಟ್ಟಿ, ಸಹೋದರಿ ವೀಣಾ ಬನ್ನಂಜೆ, ಶ್ರೀ ನಿರ್ಭಯಾನಂದ ಸ್ವಾಮೀಜಿ ಮತ್ತಿತರರಿದ್ದರು.

# ಗೆದ್ದಮೇಲೆ ಬೆಂಗಳೂರಿನಲ್ಲಿ ಕುಳಿತು ದುಡ್ಡು ಮಾಡುವ ವ್ಯಕ್ತಿಗೆ ಮತಹಾಕಬೇಡಿ: ಹೊರಟ್ಟಿ

ವಿಜಯಪುರ, ಮಾ. 30. ಮತದಾರ ಬದಲಾಗದ ಹೊರತು ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ಬದಲಾಗಲು ಸಾಧ್ಯವಿಲ್ಲ. ಆದರೆ ಚುನಾವಣೆ ಸಂದರ್ಭದಲ್ಲಿ ಮತದಾರರು ತಮ್ಮ ಭಾವನೆಗಳಿಗೆ ಸ್ಪಂದಿಸುವ ವ್ಯಕ್ತಿಯನ್ನು ಆಯ್ಕೆ ಮಾಡಿಕೊಳ್ಳುವುದು ಸೂಕ್ತ. ಹೀಗಾಗಿ ಮತದಾರ ಚುನಾವಣೆಯಲ್ಲಿ ಪ್ರಜ್ಞಾವಂತಿಕೆ ಮೆರೆಯಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಗುರುವಾರ ನಗರದಲಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಇದೀಗ ಕರ್ನಾಟಕ ರಾಜ್ಯ ವಿಧಾನಸಭಾ ಚುನಾವಣೆ ಘೋಷಣೆಯಾಗಿದೆ. ಗೆದ್ದಮೇಲೆ ಬೆಂಗಳೂರಿನಲ್ಲಿ ಕುಳಿತು ದುಡ್ಡು ಮಾಡುವ ವ್ಯಕ್ತಿಗೆ ಮತಹಾಕದೇ, ಜನಸಂಪರ್ಕದಲ್ಲಿರುವ ಹಾಗೂ ಜನರ ಸಮಸ್ಯೆಗೆ ಸ್ಪಂದಿಸುವ, ನಾಡಿನ ಕಾಳಜಿ ಇರುವ ಸಭ್ಯರಿಗೆ ಮತನೀಡಿ ಗೆಲ್ಲಿಸಿಕೊಳ್ಳುವಲ್ಲಿ ಮುಂದಾಗಬೇಕು ಎಂದರು.

ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಕುಕ್ಕರ್, ಹಣದಂಥ ಕಾಣಿಕೆ ಹಂಚುವುದನ್ನು ಜನರು ಸಹಿಸಿಕೊಳ್ಳುವುದು ಸರಿಯಲ್ಲ, ಮತದಾರ ಕೇಟ್ಟಾಗಲೇ ರಾಜಕೀಯ ವ್ಯಕ್ತಿಗಳು ಕಾಣಿಕೆ ಕೊಡುವ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆ ಚುನಾವಣೆ ವ್ಯವಸ್ಥೆಯನ್ನು ಹಾಳು ಮಾಡಲು ಮುಂಧಾಗುತ್ತಾರೆ.

ಕಾಣಿಕೆ ನೀಡುವ ಹಾಗೂ ಸ್ವೀಕರಿಸುವ ವ್ಯವಸ್ಥೆಗೆ ಕಡಿವಾಣ ಹಾಕಲು ಮತದಾರರೇ ಮನಸ್ಸು ಮಾಡಬೇಕು ಎಂದು ಕಿವಿಮಾತು ಹೇಳಿದರು.

# ಸಭಾಪತಿ ವಿಶ್ರಾಂತಿಗೆ ಸಿಗದ ಐಬಿ: ಬಸವರಾಜ ಹೊರಟ್ಟಿ ಗರಂ

**ವಿಜಯಪುರ:** ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ವಿಧಾನ ಪರಿಷತ್ ಸಭಾಪತಿಗೆ ಪ್ರವಾಸಿ ಮಂದಿರದಲ್ಲಿ ಕೊಠಡಿ ನೀಡಲು ಅಧಿಕಾರಿಗಳು ನಿರಾಕರಿಸಿದ ಪ್ರಸಂಗ ಗುರುವಾರ ನಡೆದಿದೆ. ನಗರದ ಪ್ರವಾಸಿ ಮಂದಿರದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಕೊಠಡಿ ನೀಡಲು ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ನಿರಾಕರಿಸಿದರು. ಇದರಿಂದಾಗಿ ಹೊರಟ್ಟಿ ಅವರು ಅಧಿಕಾರಿಗಳ ವಿರುದ್ಧ ಗರಂ ಆದ ಪ್ರಸಂಗ ಜರುಗಿತು. ವಿಜಯಪುರದ ಜ್ಞಾನ ಯೋಗಾಶ್ರಮದಲ್ಲಿ ನಡೆದ ಆಧ್ಯಾತ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನಗರಕ್ಕೆ ಆಗಮಿಸಿದ್ದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಪ್ರವಾಸಿ ಮಂದಿರದಲ್ಲಿ ವಿಶ್ರಾಂತಿಗೆ ಕೊಠಡಿ ಕೇಳಿದ್ದಾರೆ. ಆದರೆ, ಅಲ್ಲಿನ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಕೊಠಡಿ ನೀಡಲು ಸಾಧ್ಯವಿಲ್ಲ ಎಂದರು. ಇದರಿಂದ ಕುಪಿತರಾದ ಸಭಾಪತಿ ಪತ್ರಕರ್ತರ ಮುಂದೆ ಅಸಮಾಧಾನ ಹೊರ ಹಾಕಿದರು. ಪ್ರವಾಸಿ ಮಂದಿರಗಳನ್ನು ಬಂದ್ ಮಾಡುವಂತೆ ಚುನಾವಣೆ ಆಯೋಗ ಹೇಳಿಲ್ಲ, ಪ್ರವಾಸಿ ಮಂದಿರದಲ್ಲಿ ರಾಜಕೀಯ ಸಭೆ, ಚಟುವಟಿಕೆಗಳ ಮೂಲಕ ದುರುಪಯೋಗ ಆಗಬಾರದು ಎಂದಷ್ಟೇ ಹೇಳಿದೆ. ಆದರೆ, ವಿಜಯಪುರದಲ್ಲಿ ಪ್ರವಾಸಿ ಮಂದಿರವನ್ನು ಬಂದ್ ಮಾಡಿದ್ದಾರೆ. ಈ ಅಧಿಕಾರಿಗಳ ವಿರುದ್ಧ ಚುನಾವಣೆ ಆಯೋಗಕ್ಕೆ ಪತ್ರ ಬರೆಯುವುದಾಗಿ ಹೊರಟ್ಟಿ ಆಕ್ರೋಶ ವ್ಯಕ್ತಪಡಿಸಿದರು. ಸರ್ಕಾರದ ಚೀಫ್ ಸೆಕ್ರೆಟರಿ, ಹೋಮ್ ಸೆಕ್ರೆಟರಿ ಅವರಿಗೆ ನಿನ್ನೆ ದಿನವೇ ಈ ಬಗ್ಗೆ ಕೇಳಿದ್ದೇನೆ. ನಿಮಗೆ ಅನ್ಯಾಯ ಆಗುವುದಿಲ್ಲ. ಪ್ರವಾಸಿ ಮಂದಿರ ಉಪಯೋಗಿಸಬಹುದು ಎಂದಿದ್ದರು ಎಂದು ಸಭಾಪತಿ ಹೊರಟ್ಟಿ ಪ್ರತಿಕ್ರಿಯಿಸಿದರು.

# ಮತದಾರರೇ ರಾಜಕಾರಣಿಗಳನ್ನು ಭ್ರಷ್ಟರನ್ನಾಗಿಸುತ್ತಿದ್ದಾರೆ : ಹೊರಟ್ಟಿ ಆರೋಪ

ವಿಜಯಪುರ, 31. ರಾಜಕಾರಣಿಗಳಿಂದ ಉಚಿತ ಕೊಡುಗೆಗಳನ್ನು ಸ್ವೀಕರಿಸುವುದು ಅಥವಾ ಬೇಡಿಕೆ ಇಡುವ ಮೂಲಕ ಜನರೇ ರಾಜಕಾರಣಿಗಳನ್ನು ಭ್ರಷ್ಟಗೊಳಿಸುತ್ತಿದ್ದಾರೆ ಎಂದು ಕರ್ನಾಟಕ ವಿಧಾನಪರಿಷತ್‌ನ ಸಭಾಧ್ಯಕ್ಷರಾದ ಬಸವರಾಜ ಹೊರಟ್ಟಿ ಆರೋಪಿಸಿದ್ದಾರೆ.

ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಹೊರಟ್ಟಿ, ಕೆಲವು ಮಂದಿ ತಮ್ಮ ಇಡೀ ಜೀವನವೇ ಉಚಿತ ಕೊಡುಗೆಗಳ ಮೇಲೆ ಅವಲಂಬಿತವಾಗಿದೆ ಎಂಬಂತೆ ವರ್ತಿಸುತ್ತಾರೆ.

ಚುನಾವಣೆಗಳನ್ನು ಭ್ರಷ್ಟಮುಕ್ತವಾಗಿ ನಡೆಯಬೇಕೆಂದು ಪ್ರಯತ್ನಿಸಿದರೂ ಜನರು ಎಲ್ಲಿಯವರೆಗೆ ಉಡುಗೊರೆಗಳನ್ನು ಪಡೆಯುವುದು ಸರಿಯಲ್ಲ ಎಂದು ಭಾವಿಸುವುದಿಲ್ಲವೋ ಅಲ್ಲಿಯವರೆಗೂ ಈ ಕೆಟ್ಟ ಸಂಸ್ಕೃತಿ ಮುಂದುವರೆಯುತ್ತದೆ. ನೀವು ರಾಜಕಾರಣಿಗಳಿಂದ ಉಡುಗೊರೆ ಪಡೆದರೆ, ಚುನಾಯಿತ ಪ್ರತಿನಿಧಿಗಳು ಜನರು ಉಚಿತವಾಗಿ ಮತ ನೀಡಿಲ್ಲ. ಉಡುಗೊರೆ ಪಡೆದು ಮತ ಹಾಕಿದ್ದಾರೆಂದು ಹೇಳುತ್ತಾರೆ ಎಂದು ಹೊರಟ್ಟಿ ಅಸಮಾಧಾನ ಹೊರಹಾಕಿದ್ದಾರೆ.

ಜನರು ಬಯಸಿದಲ್ಲಿ, ರಾಜಕಾರಣಿಗಳು ನೀಡುವ ಉಡುಗೊರೆ, ಆಮಿಷಗಳನ್ನು ತಿರಸ್ಕರಿಸಿ ಚುನಾವಣೆಯಲ್ಲಿ ಪಾರದರ್ಶಕತೆ ತರಬಹುದು ಎಂದು ಹೇಳಿದ್ದಾರೆ.

ಜನತೆಗಾಗಿ ಕೆಲಸ ಮಾಡುತ್ತಿರುವ ಜನರೊಂದಿಗೆ ಇರುವಂತಹ ರಾಜಕಾರಣಿಗಳಿಗೆ ಮತ ಹಾಕಿ. ಚುನಾವಣೆಯಲ್ಲಿ ಗೆದ್ದ ನಂತರ ಜನರೊಟ್ಟಿಗೆ ಇರುವುದನ್ನು ಬಿಟ್ಟು ಹಣ ಮಾಡುವುದಕ್ಕಾಗಿಯೇ ರಾಜಧಾನಿಯಲ್ಲಿ ಕುಳಿತುಕೊಳ್ಳುವ ರಾಜಕಾರಣಿಗಳಿಗೆ ಮತ ಹಾಕಬೇಡಿ ಎಂದು ಜನತೆಗೆ ಹೊರಟ್ಟಿ ಕರೆ ನೀಡಿದ್ದಾರೆ.